ಅಸ್ತಿತ್ವಕ್ಕೆ ಬಂದು 7 ವರ್ಷಗಳು ಮುಗಿದಿದೆ. ಆದರೆ ಸಹಕಾರ ಕಾಯ್ದೆ ಪ್ರಕಾರ ವಾರ್ಷಿಕ ಮಹಾಸಭೆ ಆಗಲಿ ಯಾವುದೇ ಚುನಾವಣೆ ನೆಡೆಯದ ಆಡಳಿತ ಮಂಡಳಿಯು ಕಾರ್ಯನಿರ್ವಹಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೆ?

ಆ) ಚುನಾವಣೆ ನಡೆಸದೆ ಆಡಳಿತ ನಡೆಸುತ್ತಿರುವ ಈ ಆಡಳಿತ ಮಂಡಳಿಯನ್ನು ರದ್ದುಪಡಿಸಿ ಸರ್ಕಾರವು ಈ ಕೂಡಲೇ ಆಡಳಿತಾಧಿಕಾರಿಯನ್ನು ನೇಮಿಸಲು ಕ್ರಮ ಕೈಗೊಳ್ಳುತ್ತದೆಯೇ?

ಶ್ರೀ ಡಿ.ಕೆ. ಶಿವಕುಮಾರ್ (ಸಹಕಾರ ಸಚಿವರು) :

ಅ) ದಿನಾಂಕ : 9-2-92 ರಂದು ಚುನಾವಣೆ ಹಾಗೂ ದಿನಾಂಕ : 27-12-98 ವಾರ್ಷಿಕ ಮಹಾಸಭೆ ಜರುಗಿದ್ದುದು ಸರ್ಕಾರದ ಗಮನಕ್ಕೆ ಬಂದಿದೆ.

ಆ) ಪರಿಶೀಲಿಸಿ ಕ್ರಮಕೈಗೊಳ್ಳಲಾಗುವುದು.

ಕೋಲಾರ ಜಿಲ್ಲೆಯಲ್ಲಿ ಬರ ಪರಿಹಾರಕ್ಕೆ ಕಾಮಗಾರಿಗಳು

480 - ಶ್ರೀ ಚೌಡರೆಡ್ಡಿ (ಚಿಂತಾಮಣಿ) : ಮಾನ್ಯ ಕಂದಾಯ ಮಂತ್ರಿಗಳು. ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

1) ಕೋಲಾರ ಜಿಲ್ಲೆಯಲ್ಲಿ, ಆದರಲ್ಲೂ ಚಿಂತಾಮಣಿ ಮತ್ತು ಬಾಗೇಪಲ್ಲಿ ತಾಲ್ಲೂಕುಗಳಲ್ಲಿ ತೀವ್ರತರವಾದ ಬರಪರಿಸ್ಥಿತಿ ತಲೆದೋರಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

2) ಬರಪೀಡಿತ ಪ್ರದೇಶಗಳಲ್ಲಿನ ಜನರಿಗೆ ಉದ್ಯೋಗ ಒದಗಿಸಲು ಕ್ರಮ ಕೈಗೊಳ್ಳಲಾಗಿದೆಯೇ? (ಈ ಉದ್ದೇಶಕ್ಕಾಗಿ ಯಾವ ಯಾವ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ, ಎಷ್ಟು ಜನರನ್ನು ನೇಮಕ ಮಾಡಿದೆ ಹಾಗೂ ಹಣ ವೆಚ್ಚ ಮಾಡಲಾಗಿದೆ ಎಂಬ ವಿವರ ಒದಗಿಸುವುದು).

ಶ್ರೀ ಹೆಚ್.ಸಿ. ಶ್ರೀಕಂಠಯ್ಯ (ಕಂದಾಯ ಸಚಿವರು) :

ಅ) ಹೌದು.

ಆ) ಪ್ರಕೃತಿ ವಿಕೋಪ ಪರಿಹಾರ ನಿಧಿಯಿಂದ ರೂ. 200 ಲಕ್ಷಗಳನ್ನು ಉದ್ಯೋಗ ಸೃಜನೆ ಕಾರ್ಯಕ್ರಮಗಳಿಗಾಗಿ ಬಿಡುಗಡೆ ಮಾಡಲಾಗಿದೆ. ಈ ದಿಶೆಯಲ್ಲಿ ಸಂಬಂಧಪಟ್ಟ ಜಿಲ್ಲಾಧಿಕಾರಿಗಳು ಹಾಗೂ ತಹಶೀಲ್ದಾರರುಗಳನ್ನು ಸೂಕ್ತ ಕ್ರಮ ಕೈಗೊಳ್ಳುವಂತೆ ಸೂಚಿಸಲಾಗಿದ್ದು ವಿವಿಧ ಕಾರ್ಯಕ್ರಮಗಳಿಗೆ ಆಡಳಿತಾತ್ಮಕ ಮಂಜೂರಾತಿ ನೀಡಲಾಗುತ್ತದೆ.

ಅಂಗನವಾಡಿ ಕಟ್ಟಡಗಳ ನಿರ್ಮಾಣದ ಬಗ್ಗೆ

481 - ಶ್ರೀ. ಚೌಡರೆಡ್ಡಿ (ಚಿಂತಾಮಣಿ) : ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಕಟ್ಟಡಗಳು ಇಲ್ಲದೇ ಇರುವ ಅಂಗನವಾಡಿ ಕೇಂದ್ರಗಳ ಸಂಖ್ಯೆ ಈಗ ಇರುವ

ಕಟ್ಟಡಗಳಿಗೆ ದೀರ್ಘಕಾಲದಿಂದ ದುರಸ್ತಿ ಆಗದೇ ಇರುವ ಈ ವೆಚ್ಚ ಭರಿಸುವುದರ ಬಗ್ಗೆ ಸೂಕ್ತ ಪ್ರಸ್ತಾವನೆಗಳಿವೆಯೇ?

ಶ್ರೀಮತಿ ಮೋಟಮ್ಮ (ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಸಚಿವರು) :

ಅ) 25073 ಅಂಗನವಾಡಿ ಕೇಂದ್ರಗಳಿಗೆ ಸ್ವಂತ ಕಟ್ಟಡಗಳು ಇರುವುದಿಲ್ಲ, ರಾಜ್ಯದಲ್ಲಿ ಒಟ್ಟು 15097 ಸ್ವಂತ ಕಟ್ಟಡಗಳಿದ್ದು, ಅವುಗಳ ದುರಸ್ತಿ ಹಾಗೂ ನಿರ್ವಹಣೆಗೆ ಇಲಾಖಾ ಆಯವ್ಯಯದಲ್ಲಿ ಅವಕಾಶ ಇರುವುದಿಲ್ಲವಾದ್ದರಿಂದ ಜಿಲ್ಲಾ ಪಂಚಾಯತ್ ಯೋಜನೆಯಲ್ಲಿ ದುರಸ್ತಿಗಾಗಿ ಬೇಕಾಗುವ ಹಣವನ್ನು ಅಳವಡಿಸಿಕೊಂಡು ದುರಸ್ತಿ ಹಾಗೂ ಅವುಗಳ ನಿರ್ವಹಣೆ ಮಾಡಲು ಎಲ್ಲಾ ಜಿಲ್ಲಾ ಪಂಚಾಯತ್‌ನ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳಿಗೆ ತಿಳಿಸಲಾಗಿರುತ್ತದೆ.

ಚಿಂತಾಮಣಿ ತಾಲ್ಲೂಕಿನಲ್ಲಿ ವೃದ್ಧಾಪ್ಯ ವೇತನ, ವಿಧವಾ ವೇತನ ಮತ್ತು ಅಂಗವಿಕಲ ಯೋಜನೆಗಳ ಅಡಿಯಲ್ಲಿ ಬಾಕಿ ಇರುವ ಪ್ರಕರಣಗಳು

482 - ಶ್ರೀ. ಚೌಡರೆಡ್ಡಿ (ಚಿಂತಾಮಣಿ) : ಮಾನ್ಯ ಕಂದಾಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಚಿಂತಾಮಣಿ ಮತ ಕ್ಷೇತ್ರದಲ್ಲಿ ವೃದ್ಧಾಪ್ಯ ವೇತನ, ವಿಧವಾ ವೇತನ ಮತ್ತು ಅಂಗವಿಕಲ ವೇತನ ಯೋಜನೆಗಳಡಿಯಲ್ಲಿ ಬಾಕಿ ಇರುವ ಪ್ರಕರಣಗಳ ಸಂಖ್ಯೆ.

ಶ್ರೀ ಹೆಚ್.ಸಿ. ಶ್ರೀಕಂಠಯ್ಯ (ಕಂದಾಯ ಸಚಿವರು) :

ಅ) ಚಿಂತಾಮಣಿ ಮತ ಕ್ಷೇತ್ರದಲ್ಲಿ ಬಾಕಿ ಇರುವ ಪ್ರಕರಣಗಳ ಸಂಖ್ಯೆ ಕೆಳಕಂಡಂತಿದೆ.

ವೃದ್ಧಾಪ್ಯ ವೇತನ ಪ್ರಕರಣಗಳು	50
ವಿಧವಾ ವೇತನ ಪ್ರಕರಣಗಳು	08
ಅಂಗವಿಕಲ ವೇತನ ಪ್ರಕರಣಗಳು	46

ಬಗರ್ ಹುಕುಮ್ ಸಾಗುವಳಿಯ ಸಕ್ರಮ

483 - ಶ್ರೀ. ಚನ್ನಿಗಪ್ಪ. ಸಿ. (ಕೊರಟಗೆರೆ) : ಮಾನ್ಯ ಕಂದಾಯ ಸಚಿವರು. ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ

ಅ) ರಾಜ್ಯದಲ್ಲಿ ಬಗರ್ ಹುಕುಮ್ ಸಾಗುವಳಿ ಸಕ್ರಮಗೊಳಿಸುವ ಬಗ್ಗೆ ಸರ್ಕಾರಕ್ಕೆ ಬಂದಿರುವ ಅರ್ಜಿಗಳ ಸಂಖ್ಯೆ ಎಷ್ಟು?

ಆ) ತುಮಕೂರು ಜಿಲ್ಲೆ ಕೊರಟಗೆರೆ ತಾಲ್ಲೂಕಿನಲ್ಲಿ ಬಗರ್ ಹುಕುಮ್ ಸಾಗುವಳಿ ಸಕ್ರಮಗೊಳಿಸುವ ಸಲುವಾಗಿ ಸರ್ಕಾರಕ್ಕೆ ಬಂದಿರುವ ಅರ್ಜಿಗಳ ಸಂಖ್ಯೆ ಎಷ್ಟು?